# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಪ್ರದೇಶದ ಪರಿಷ್ಕೃತ ಕರಡು ರಚನಾ ನಕ್ಷೆ-2031ಕ್ಕೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:-

1) ಸರ್ಕಾರಿ ಆದೇಶ ಸಂಖ್ಯೆ:ನಅಇ 51 ಬಿಎಂಆರ್ 2002, ದಿನಾಂಕ.21-9-2005.
2) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು, ಇವರ ಪತ್ರ ಸಂಖ್ಯೆ.ಬಿಎಂಆರ್‌ಡಿಎ/ಟಿಪಿ/ಎಸ್‌ಟಿಆರ್‌ಪ್ಲಾನ್/18/2007-08, ದಿನಾಂಕ.21-6-2010 ಮತ್ತು 12-8-2010.

ಪ್ರಸ್ತಾವನೆ:-

ಮೇಲೆ (1)ರಲ್ಲಿ ಓದಲಾದ ದಿನಾಂಕ.21-9-2005ರ ಆದೇಶದಲ್ಲಿ ಸರ್ಕಾರವು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಪ್ರದೇಶದ ವ್ಯಾಪ್ತಿಯ ಯೋಜಿತ ಬೆಳವಣಿಗೆಗಾಗಿ "ರಚನಾ ನಕ್ಷೆ"ಗೆ ಅನುಮೋದನೆ ನೀಡಲಾಗಿತ್ತು.

ಮೇಲೆ (2)ರಲ್ಲಿ ಓದಲಾದ ದಿನಾಂಕ.21-6-2010 ಮತ್ತು 12-8-2010ರ ಪತ್ರಗಳಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಇವರು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯು ಶೀಘ್ರಗತಿಯಲ್ಲಿ ಬೆಳವಣಿಗೆ ಹೊಂದುತ್ತಿರುವುದರಿಂದ, ಸದರಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಿಗೆ ರಚನಾ ನಕ್ಷೆಯನ್ನು ತಯಾರಿಸುವ ಕಾರ್ಯವನ್ನು ಮೆ:ಗ್ರೂಪ್ ಎಸ್‌ಸಿಇ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಇವರಿಗೆ ವಹಿಸಲಾಗಿತ್ತೆಂದು, ಸದರಿ ಸಂಸ್ಥೆಯವರು ತಯಾರಿಸಿರುವ ಪರಿಷ್ಕೃತ ನಕ್ಷೆ ಮೇಲೆ ಒಂದು ನಿರೂಪಣೆಯನ್ನು ಏರ್ಪಡಿಸಿ, ಸಂಬಂಧಪಟ್ಟ ಇಲಾಖೆಗಳಿಂದ ಸಲಹೆ/ಸೂಚನೆಗಳನ್ನು ಆಹ್ವಾನಿಸಿ ಈ ಸಲಹೆ/ಸೂಚನೆಗಳನ್ನು ಹಾಗೂ ಅಬ್ಬೈಡ್ ಸಮಿತಿಯು ಶಿಫಾರಸ್ಸು ಮಾಡಿರುವ ಸಲಹೆ/ಸೂಚನೆಗಳನ್ನು ಅಳವಡಿಸಿ, ಮತ್ತು ಕರಡು ರಚನಾ ನಕ್ಷೆಯಲ್ಲಿ ವ್ಯವಸಾಯ ವಲಯದಲ್ಲಿ ಅನುಮತಿಸಬಹುದಾದ ಉಪಯೋಗಗಳಲ್ಲಿ 'Eco friendly/Heritage Tourist Resorts with zero discharge approved by Tourism Department' ಇವುಗಳನ್ನು ಅಳವಡಿಸಿಕೊಂಡು ಬೆಂಗಳೂರು

ಮಹಾನಗರ ಪ್ರದೇಶಾಭಿವೃದ್ಧಿ
ಸಂ. 2756
ದಿ. 26/02/2011

ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಯೋಜಿತ ಬೆಳವಣಿಗೆಯ ದೃಷ್ಟಿಯಿಂದ ಪರಿಷ್ಕೃತ ಕರಡು ರಚನಾ ನಕ್ಷೆ-2031ಕ್ಕೆ ಮಂಜೂರಾತಿ ನೀಡಲು ಸರ್ಕಾರವನ್ನು ಕೋರಿರುತ್ತಾರೆ. ಕಾರಣ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ:ನಅಇ 204 ಬಿಎಂಆರ್ 2010, ಬೆಂಗಳೂರು, ದಿನಾಂಕ. 24-2-2011.**

ಪ್ರಸ್ತಾವನೆಯಲ್ಲಿ ಹೇಳಿರುವ ಅಂಶಗಳನ್ನು ಪರಿಗಣಿಸಿ, ಬೆಂಗಳೂರು ಮಹಾನಗರ ಪ್ರದೇಶದ ಯೋಜಿತ ಬೆಳವಣಿಗೆಗಾಗಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಇವರು ಸಿದ್ಧಪಡಿಸಿರುವ ಕರಡು ರಚನಾ ನಕ್ಷೆ-2031ಕ್ಕೆ ವ್ಯವಸಾಯ ವಲಯದಲ್ಲಿ ಅನುಮತಿಸಬಹುದಾದ ಉಪಯೋಗಗಳಲ್ಲಿ 'Eco friendly/Heritage Tourist Resorts with zero discharge approved by Tourism Department' ಇವುಗಳನ್ನು ಅಳವಡಿಸಿಕೊಳ್ಳುವ ನಿಬಂಧನೆಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ. ಅಲ್ಲದೆ, ಸಾರ್ವಜನಿಕರಿಗಾಗಿ ಈ ಪ್ರಸ್ತುತ ಕರಡು ರಚನಾ ನಕ್ಷೆಯನ್ನು ಪ್ರಕಟಿಸಿ, 30 ದಿನಗಳ ಕಾಲಾವಕಾಶ ನೀಡಿ ಆಕ್ಷೇಪಣೆ/ಸಲಹೆಗಳನ್ನು ಆಹ್ವಾನಿಸಿ ಜಾಹೀರಾತು ನೀಡಲು ಆದೇಶಿಸಿದೆ..

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

24/2/11

(ಎಂ.ಎಸ್.ಪ್ರೇಮಚಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಸದರಿ ಆದೇಶವನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಕೂಡಲೇ ಒದಗಿಸತಕ್ಕದ್ದು.

ಇವರಿಗೆ:-

1) ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಮುಖ್ಯಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

3) ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4) ಸರ್ಕಾರದ ಅಪರ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿಗಳು.
5) ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು ಹಾಗೂ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
6) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
7) ಅಧ್ಯಕ್ಷರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಕಾವೇರಿ ಭವನ, ಬೆಂ.
8) ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪಿ.ಯು.ಬಿಲ್ಡಿಂಗ್, ಎಂ.ಜಿ.ರಸ್ತೆ, ಬೆಂಗಳೂರು.
9) ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ಬೆಂಗಳೂರು/ ನೆಲಮಂಗಲ ಯೋಜನಾ ಪ್ರಾಧಿಕಾರ, ನೆಲಮಂಗಲ / ಕನಕಪುರ ಯೋಜನಾ ಪ್ರಾಧಿಕಾರ, ಕನಕಪುರ.
10) ನಿರ್ದೇಶಕರು, ನಗರ ಯೋಜನಾ ಇಲಾಖೆ.
11) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು
12) ಜಿಲ್ಲಾಧಿಕಾರಿಗಳು, ಗ್ರಾಮೀಣ/ನಗರ, ಬೆಂಗಳೂರು.
13) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಬೆಂಗಳೂರು ನಗರ ಮತ್ತು ಗ್ರಾಮೀಣ.
14) ಆಯುಕ್ತರು, ನಗರಸಭೆ, ಬ್ಯಾಟರಾಯನಪುರ, ಮಹದೇವಪುರ, ದಾಸರಹಳ್ಳಿ, ಕೆ.ಆರ್.ಪುರಂ, ಬೊಮ್ಮನಹಳ್ಳಿ, ರಾಜರಾಜೇಶ್ವರಿನಗರ, ಯಲಹಂಕ.
15) ಆಯುಕ್ತರು, ರಾಮನಗರ-ಚನ್ನಪಟ್ಟಣ ಅಭಿವೃದ್ಧಿ.
16) ಆಯುಕ್ತರು, ಕೆಂಗೇರಿ ಪುರಸಭೆ, ಬೆಂಗಳೂರು.
17) ಮುಖ್ಯಾಧಿಕಾರಿಗಳು, ಪುರಸಭೆ, ಆನೇಕಲ್.
18) ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
19) ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳ ಆಪ್ತಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
20) ಸರ್ಕಾರದ ಕಾರ್ಯದರ್ಶಿಗಳ ಆಪ್ತಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
21) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.